# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು - 572 103
ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಕಾ.ಅ.ಪ.2020–21: 1046

ದಿನಾಂಕ: 04.08.2020

## ನೆನಪೋಲೆ

**ವಿಷಯ: 2020–21ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಬಗ್ಗೆ.**

ಉಲ್ಲೇಖ: 1) ಈ ಕಚೇರಿ ಸುತ್ತೋಲೆ ಸಂಖ್ಯೆ: ತುವಿ:ಕಾ.ಅ.ಪ.2020–21/898 ದಿ:21.07.2020
2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ : 04.08.2020

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020–21ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ಪ್ರಸ್ತಾವನೆಗಳನ್ನು ಆನ್-ಲೈನ್ ಮೂಲಕ ಪ್ರಸ್ತಾವನೆಯನ್ನು ದಿನಾಂಕ 05.08.2020ರೊಳಗೆ ಸಲ್ಲಿಸುವಂತೆ ಉಲ್ಲೇಖ (1)ರ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ. ಆದರೆ, ಇದುವರೆವಿಗೂ ಹಲವು ಕಾಲೇಜುಗಳು ಆನ್-ಲೈನ್ (www.onlineaffiliation.karnataka.gov.in) ಮೂಲಕ ಪ್ರಸ್ತಾವನೆ ಸಲ್ಲಿಸಲು ವಿಶ್ವವಿದ್ಯಾನಿಲಯಕ್ಕೆ ಮನವಿ (Send request) ಕಳುಹಿಸಿರುವುದಿಲ್ಲ. ಇನ್ನು ಕೆಲವು ಕಾಲೇಜುಗಳು Login ID ಪಡೆದುಕೊಂಡಿದ್ದರೂ ಸಹ ಆನ್-ಲೈನ್ ಮೂಲಕ ಸಂಯೋಜನೆ ಪ್ರಸ್ತಾವನೆಯನ್ನು ಹಾಗೂ ಮುದ್ರಿತ ಪ್ರತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿರುವುದಿಲ್ಲ.

ವಿಶ್ವವಿದ್ಯಾನಿಲಯವು ಕಾಲೇಜುಗಳ ಸಂಯೋಜನೆ ಸಂಬಂಧ ಸರ್ಕಾರದ ನಿರ್ದೇಶನದಂತೆ ಆನ್-ಲೈನ್ ಮೂಲಕ ಸಂಯೋಜನೆ ಪ್ರಕ್ರಿಯೆಯನ್ನು ತುರ್ತಾಗಿ ಕೈಗೊಳ್ಳಬೇಕಾಗಿರುತ್ತದೆ. ಆದ್ದರಿಂದ ದಿನಾಂಕ 10.08.2020 ರೊಳಗಾಗಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವುದರ ಜೊತೆಗೆ ಮುದ್ರಿತ ಪ್ರತಿಗಳನ್ನು ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸುವಂತೆ ಹಾಗೂ ಒಂದು ವೇಳೆ ಅರ್ಜಿಯನ್ನು ಸಲ್ಲಿಸದಿದ್ದಲ್ಲಿ ಪ್ರಾಂಶುಪಾಲರು/ ಕಾಲೇಜಿನ ಆಡಳಿತ ಮಂಡಳಿಯವರೇ ನೇರ ಜವಾಬ್ದಾರರಾಗಿರುತ್ತೀರಿ ಎಂದು ತಿಳಿಸಲು ಮಾನ್ಯ ಕುಲಪತಿಯವರಿಂದ ನಿರ್ದೇಶಿತನಾಗಿದ್ದೇನೆ.

04/08

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, - ವಿ.ವಿ ಯ ಅಂತರ್ಜಾಲದಲ್ಲಿ ಪ್ರಕಟಿಸುವುದು ಮತ್ತು e-mail ಮುಖಾಂತರ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಳುಹಿಸುವುದು.
3. ಕಛೇರಿ ಪ್ರತಿ.